# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

| ಸಂಪುಟ ೧೬೧<br>Volume 161 | ಕಲಬುರಗಿ, ಮಂಗಳವಾರ, ೨೫, ಆಗಸ್ಟ್, ೨೦೨೬ (ಭದ್ರಪದ, ೦೩, ಶಕವರ್ಷ, ೧೯೪೮)<br>KALBURGI, TUESDAY, 25, AUGUST, 2026 ( BHADRAPADA , 03, SHAKAVARSHA, 1948) | ಸಂಚಿಕೆ ೪೧<br>Issue 41 |
|---|---|---|

**ಭಾಗ ೬–ಸಿ**


ಕಲಬುರಗಿ ವಿಭಾಗಕ್ಕೆ ಮತ್ತು ಕಲಬುರಗಿ, ಬಳ್ಳಾರಿ, ರಾಯಚೂರು, ಬೀದರ, ಕೊಪ್ಪಳ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು ಶಾಸನಬದ್ಧವಲ್ಲದ ಆದರೆ ಜಮೀನು ಸಂಗ್ರಹಣ ಶಾಸನದ ಮೇರೆಗೆ ಹೊರಡಿಸಿದ ಅಧಿಸೂಚನೆಗಳ ಸಹಿತವಾಗಿ ಸರ್ಕಾರದ ಅಧಿಸೂಚನೆಗಳು.

## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ

**ಅಧಿಸೂಚನೆ ಸಂಖ್ಯೆ: ಜಿನ್ಯಾಯಾ: ಆಡಳಿತ: 03/2026 ದಿನಾಂಕ: 20.08.2026**

**ವಿಷಯ** : ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಬೆರಳಚ್ಚುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

**ಉಲ್ಲೇಖ** :
1. ಕರ್ನಾಟಕ ಉಚ್ಚನ್ಯಾಯಾಲಯದ ಪತ್ರ ಸಂ: ಡಿ.ಜೆ.ಎ/712/2025 ದಿನಾಂಕ: 09.02.2026.
2. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995.
3. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995 ಮತ್ತು ಸರ್ಕಾರಿ ಆದೇಶ ಸಂ: ಸಿಆಸುಇ 53 ಸೆನೆನಿ 2007 ಬೆಂಗಳೂರು ದಿನಾಂಕ 04.01.2008.
4. ಸರ್ಕಾರಿ ಆದೇಶ ಸಂ: ಸಿಆಸುಇ 01 ಸೆಹಿಮ 2026, ಬೆಂಗಳೂರು ದಿನಾಂಕ: 27.02.2026.
5. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2023, ಬೆಂಗಳೂರು ದಿನಾಂಕ: 08.03.2023.
6. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 27.04.2026.
7. ಸರ್ಕಾರಿ ಆದೇಶ ಸಂ: ಸಕಇ 515 ಪಕವಿ 2026 ಬೆಂಗಳೂರು, ದಿನಾಂಕ: 08.05.2026.
8. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 13.05.2026, ತಿದ್ದುಪಡಿ ಆದೇಶ ದಿನಾಂಕ: 18.05.2026 ಮತ್ತು ಸೇರ್ಪಡೆ ಆದೇಶ ದಿನಾಂಕ 25.05.2026.

9. ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ–1977 (ತಿದ್ದುಪಡಿ) ನಿಯಮ, 2021.
10. ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೇರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007 ಹಾಗೂ 2021.
11. ಕಛೇರಿ ಟಿಪ್ಪಣಿ ಹಾಗೂ ಅದರ ಮೇಲೆ ಆದ ಆದೇಶ.

– * * * –

ಈ ಮೂಲಕ, ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ)ದಲ್ಲಿ ಖಾಲಿ ಇರುವ ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಯಾದಗಿರಿ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://yadgir.dcourts.gov.in/online-recruitment/ ನಲ್ಲಿ ನೀಡಲಾದ ಲಿಂಕ್ ಮೂಲಕ ಕೆಳಗೆ ಹೇಳಿದ ದಿನಾಂಕಗಳ ಒಳಗಾಗಿ ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ | 31.08.2026 |
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 30.09.2026<br>ಸಮಯ ರಾತ್ರಿ 11.59 ಗಂಟೆಯವರೆಗೆ |
| ಶುಲ್ಕ ಪಾವತಿಸಲು ಕಡೆಯ ದಿನಾಂಕ | 01.10.2026. |

**ಬೆರಳಚ್ಚುಗಾರರ:** (Typists) ಒಟ್ಟು ಹುದ್ದೆಗಳ ಸಂ: **05**

**ವೇತನ ಶ್ರೇಣಿ:** 34100–800–35700–900–39300–1000–43300–1125–47800–1250–52800–1375–58300–1500–64300–1650–67600 ಮತ್ತು ಇತರೆ ಭತ್ಯೆಗಳು.

**ಕಲ್ಯಾಣ ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದ) ಅಭ್ಯರ್ಥಿಗಳಿಗಾಗಿ ಗುರುತಿಸಿರುವ ಮೀಸಲಾತಿ:**

**(Local Cadre-371-J)**

| **ಮೀಸಲಾತಿ ವರ್ಗ** | **ಇತರೆ** | **ಮಹಿಳೆ** | **ಗ್ರಾಮೀಣ** | **ಒಟ್ಟು** |
|---|---|---|---|---|
| ಸಾಮಾನ್ಯ | **1** | **1** | **1** | **3** |
| ಪ್ರವರ್ಗ–2ಎ | **1** | **–** | **–** | **1** |
| ಪ್ರವರ್ಗ–3ಬಿ | **1** | **–** | **–** | **1** |
| **ಒಟ್ಟು** | **3** | **1** | **1** | **5** |

ಮಹಿಳಾ ಮತ್ತು ಮಾಜಿ ಸೈನಿಕ ಮೀಸಲಾತಿಯಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು (G.O No. DPAR 34 ಸೇನೆನಿ 95, Bengaluru dated 15th July, 1996).

**ವಿದ್ಯಾರ್ಹತೆ:** 1. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ ಅಥವಾ ಮೂರು ವರ್ಷದ ಡಿಪ್ಲೋಮ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲಿ ಹಿರಿಯ ಶ್ರೇಣಿಯ ಬೆರಳಚ್ಚು ಅಥವಾ ಡಿಪ್ಲೋಮಾ ವಾಣಿಜ್ಯ ಪರೀಕ್ಷೆ ಅಥವಾ ತತ್ಸಮಾ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ವಿಶೇಷ ಸೂಚನೆ:**

1. ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆ ಎಂದರೆ ಕರ್ನಾಟಕ ಸರ್ಕಾರದ ಸುತ್ತೋಲೆ ಸಂ: ಡಿ.ಪಿ.ಎ.ಆರ್ 81 ಎಸ್.ಸಿ.ಆರ್ 2017, ದಿನಾಂಕ 27.02.2018 ರಲ್ಲಿ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗಳು/ಕೋರ್ಸಗಳಾಗಿರುತ್ತವೆ.

**ಆಯ್ಕೆ ವಿಧಾನ:**

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೇರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007ರನ್ವಯ ಅಭ್ಯರ್ಥಿಗಳಿಗೆ ಕನ್ನಡ ಹಾಗೂ ಇಂಗ್ಲೀಷ್ ಭಾಷೆಗಳಲ್ಲಿ 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯನ್ನು ಬೆರಳಚ್ಚು ಯಂತ್ರ/ಗಣಕಯಂತ್ರ, ಮೇಲೆ ಬೆರಳಚ್ಚು ಮಾಡಲು ಹೇಳಲಾಗುವುದು.

**ಟಿಪ್ಪಣಿ: ಸಾಮರ್ಥ್ಯ ಪರೀಕ್ಷೆಯು ಕನ್ನಡ ಹಾಗೂ ಇಂಗ್ಲೀಷ್ ಎರಡರಲ್ಲಿಯೂ ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೆರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಎರಡರಲ್ಲಿಯೂ ಪಡೆಯಬೇಕು ಮತ್ತು ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.**

**ವಯೋಮಿತಿ:** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರು ಕನಿಷ್ಠ 18 ವರ್ಷದವರಾಗಿರಬೇಕು ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| **ಅಭ್ಯರ್ಥಿಯು ಸೇರಿದ ವರ್ಗ** | | **ಗರಿಷ್ಠ ವಯೋಮಿತಿ** |
|---|---|---|
| ಸಾಮಾನ್ಯ ಅಭ್ಯರ್ಥಿಗಳು | : | 40 ವರ್ಷಗಳು |
| ಇತರೆ ಹಿಂದುಳಿದ ವರ್ಗಗಳ ಪ್ರವರ್ಗ 2(ಎ)/ 2(ಬಿ)/ 3(ಎ)/ 3(ಬಿ). | : | 43 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1 | : | 45 ವರ್ಷಗಳು |

1. ಸರ್ಕಾರದ ಆದೇಶ ಸಂ: ಸಿಆಸುಇ 262 ಸೇನೆನಿ 2025, ದಿನಾಂಕ: 29.01.2026 ರನ್ವಯ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಕ್ರಮವಾಗಿ (as a one time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

2. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯದ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆಗೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳು ಅವರು ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

3. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

4. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿವೆಯೋ ಅಷ್ಟು ವರ್ಷಗಳು.

6. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್ ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

7. ಅಭ್ಯರ್ಥಿಯು ರಾಜ್ಯ ಸರ್ಕಾರದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

**ಪರಿವೀಕ್ಷಣಾ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ ನಿಯಮಗಳು (ಸಾಮಾನ್ಯ ನೇಮಕಾತಿ) ನಿಯಮ 1977 ತಿದ್ದುಪಡಿ ನಿಯಮ 2021 ರೂಲ್ 11ನ್ನು ಅನುಸರಿಸಲು ತಿಳಿಸಲಾಗಿದೆ.

**ನಿಗದಿತ ಅರ್ಜಿ ಶುಲ್ಕ: ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:**

| | |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | ರೂ. 200/– |
| ಪ್ರವರ್ಗ–2ಎ/2ಬಿ/3ಎ/2ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 100/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 50/– |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://yadgir.dcourts.gov.in/online-recruitment/ ರಲ್ಲಿ ನೀಡಲಾದ ಲಿಂಕ್ ಮುಖಾಂತರ **Online payment through net banking/Credit-Card/Debit-Card/UPI** ಸೌಲಭ್ಯದ ಮೂಲಕ ಪಾವತಿಸಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ಚಲನ್/ಡಿಮಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು.

**ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ವಿಧಾನ:**

1. ಅಭ್ಯರ್ಥಿಯು ಆನ್‌ಲೈನ್ ಮೂಲಕ ಅರ್ಜಿಯನ್ನು ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://yadgir.dcourts.gov.in/online-recruitment/ನಲ್ಲಿ ಸಲ್ಲಿಸಲು ಅವಕಾಶವಿರುತ್ತದೆ.

**ಸೂಚನೆ: ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ವಿಧಾನದಿಂದ ಕಳುಹಿಸಲಾದ/ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

2. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಗತ್ಯವಿರುವ ಮಾಹಿತಿಯನ್ನು ಭರ್ತಿ ಮಾಡಿ, ಉಲ್ಲೇಖಿಸಲಾದ ಸೂಚನೆಗೆ ಅನುಗುಣವಾಗಿ ಶುಲ್ಕವನ್ನು ಪಾವತಿಸತಕ್ಕದ್ದು. ಆನ್‌ಲೈನ್ ಅರ್ಜಿಯನ್ನು ಅಂತಿಮವಾಗಿ ಸಲ್ಲಿಸುವ ಮೊದಲು ಅಭ್ಯರ್ಥಿಯು ಭರ್ತಿ ಮಾಡಿದ ವಿವರಗಳು ಎಲ್ಲಾ ರೀತಿಯಲ್ಲೂ ಸರಿಯಾಗಿವೆಯೇ ಎಂದು ಖಚಿತಪಡಿಸಿಕೊಳ್ಳತಕ್ಕದ್ದು. ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಹಿಂಪಡೆಯಲು ಅಥವಾ ಮಾರ್ಪಡಿಸಲು ಅವಕಾಶವಿರುವುದಿಲ್ಲ.

3. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಸಂಬಂಧಿತ ಕಾಲಂಗಳಲ್ಲಿ ಸಂವಹನಕ್ಕಾಗಿ ಕಡ್ಡಾಯವಾಗಿ ಅವನ/ಅವಳ ಚಾಲ್ತಿಯಲ್ಲಿರುವ ಸರಿಯಾದ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್ ಐಡಿಯನ್ನು ಒದಗಿಸಬೇಕು. ತಪ್ಪಾದ ಮಾಹಿತಿಯನ್ನು ಒದಗಿಸಿದಲ್ಲಿ, ಎಸ್ಎಂಎಸ್ ಅಥವಾ ಇ–ಮೇಲ್ ಮುಖಾಂತರ ಸೂಚನೆ/ ಸಂದೇಶಗಳು ಅಭ್ಯರ್ಥಿಗಳಿಗೆ ತಲುಪದಿರುವುದಕ್ಕೆ ಈ ಪ್ರಾಧಿಕಾರವು ಜವಾಬ್ದಾರರಾಗಿರುವುದಿಲ್ಲ.

4. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಗಾತ್ರದ ಶ್ವೇತ ವರ್ಣದ ಹಿನ್ನಲೆಯುಳ್ಳ ಛಾಯಾಚಿತ್ರವನ್ನು ಸ್ಕ್ಯಾನ್ ಮಾಡಬೇಕು (5ಸೆ.ಮೀ. ಉದ್ದ X 3.5 ಸೆ.ಮೀ. ಅಗಲ ಮತ್ತು ಗರಿಷ್ಠ 50 ಕೆಬಿ ಗಾತ್ರ) ಕಪ್ಪು ಬಾಲಪಾಯಿಂಟ್ ಪೆನ್ನಿನಲ್ಲಿ ಬಿಳಿ ಕಾಗದದ ಮೇಲೆ ಸಹಿಯನ್ನು ಮಾಡಿ (2.5 ಸೆ.ಮೀ. ಉದ್ದ X 7.5 ಸೆ.ಮೀ. ಅಗಲ ಮತ್ತು ಗರಿಷ್ಠ 25 ಕೆಬಿ ಗಾತ್ರ) jpg ಸ್ವರೂಪದಲ್ಲಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. jpg ಚಿತ್ರಗಳು ಸ್ಪಷ್ಟವಾಗಿ ಕಾಣುವಂತಿರಬೇಕು, ಹಾಗೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

5. **ಅಭ್ಯರ್ಥಿಯು ಈ ಕೆಳಗಿನ ದಾಖಲೆಗಳನ್ನು ಕಡ್ಡಾಯವಾಗಿ ಮೇಲೆ ತಿಳಿಸಿದ ವೆಬ್‌ಸೈಟ್‌ನಲ್ಲಿ ಅಪ್ ಲೋಡ್ ಮಾಡಬೇಕು.**

i) a) ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.

b) ದ್ವಿತೀಯ ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ.

c) ಹಿರಿಯ ಶ್ರೇಣಿಯ ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳು.

ii) ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಅನ್ವಯಿಸಿದರೆ ಮಾತ್ರ)

iii) 371 ಜೆ ಪ್ರಮಾಣ ಪತ್ರ.

iv) ಇತರೆ ಮೀಸಲಾತಿಗಳು (ಅನ್ವಯಿಸಿದರೆ ಮಾತ್ರ): ಗ್ರಾಮೀಣ ಪ್ರಮಾಣ ಪತ್ರ 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮ ಪ್ರಮಾಣ ಪತ್ರ 1 ರಿಂದ 10ನೇ ತರಗತಿವರೆಗೆ, ಅಂಗವಿಕಲ ಪ್ರಮಾಣ ಪತ್ರ, ಯೋಜನಾ ನಿರಾಶ್ರಿತರು, ಮಾಜಿ ಸೈನಿಕ (ಸೇವೆಯಿಂದ ವಿಮುಕ್ತಿಗೊಳಿಸಿದ) ಇವುಗಳ ಮೂಲ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಪಿಡಿಎಫ್ ನಮೂನೆಯಲ್ಲಿ ಮಾತ್ರ ಆಪ್ ಲೋಡ್ ಮಾಡತಕ್ಕದ್ದು ಮತ್ತು ಓದಲು ಸ್ಪಷ್ಟವಾಗಿರಬೇಕು.

**ಸೂಚನೆ: ಅಭ್ಯರ್ಥಿಯು ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಮೇಲೆ ಹೇಳಲಾದ ಯಾವುದೇ ಪ್ರಮಾಣಪತ್ರಗಳನ್ನು ಅಪ್‌ಲೋಡ್ ಮಾಡಲು ವಿಫಲರಾದಲ್ಲಿ, ನಂತರ ಸ್ವೀಕರಿಸಲಾಗುವುದಿಲ್ಲ.**

v) ಆನ್‌ಲೈನ್ ಅರ್ಜಿಯನ್ನು ಅಂತಿಮವಾಗಿ ಸಲ್ಲಿಸುವ ಮೊದಲು, ಅಭ್ಯರ್ಥಿಯು ಸರಿಯಾಗಿ ಭರ್ತಿ ಮಾಡಿದ ಅರ್ಜಿಯನ್ನು ಪೂರ್ವವೀಕ್ಷಿಸಲು (preview) ಅವಕಾಶವಿರುತ್ತದೆ. ಅಭ್ಯರ್ಥಿಯು ಭರ್ತಿ ಮಾಡಿದ ಅರ್ಜಿಯನ್ನು ದಾಖಲೆಗಾಗಿ ಮುದ್ರಿಸಿಟ್ಟುಕೊಳ್ಳತಕ್ಕದ್ದು.

vi) ಅಭ್ಯರ್ಥಿಯು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗಿರಿ ವೆಬ್‌ಸೈಟ್‌ನಲ್ಲಿ ಒದಗಿಸಲಾಗುವ ಲಿಂಕ್‌ನಿಂದ ಸೂಚನಾ/ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಲು ಮತ್ತು ಸಂದರ್ಶನಕ್ಕೆ ಅರ್ಹತೆಯ ಕುರಿತು ಮಾಹಿತಿಗಾಗಿ ತಮ್ಮ ಅರ್ಜಿ ಸಂಖ್ಯೆಯನ್ನು ಜಾಗರೂಕತೆಯಿಂದ ಇಟ್ಟುಕೊಳತಕ್ಕದ್ದು. ಅಭ್ಯರ್ಥಿಗಳು ಜಿಲ್ಲಾ ನ್ಯಾಯಾಲಯದ ಜಾಲತಾಣದ ನೇಮಕಾತಿ ಅಧಿಸೂಚನೆ ವಿಭಾಗಕ್ಕೆ ನಿಯಮಿತವಾಗಿ ಭೇಟಿ ನೀಡಿ ಹುದ್ದೆಗಳ ಕುರಿತಾದ ಮಾಹಿತಿಯನ್ನು ಪಡೆಯತಕ್ಕದ್ದು.

vii) ಸಂದರ್ಶನಕ್ಕೆ ಆಯ್ಕೆ ಮಾಡಲಾಗುವ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ಜಾಲತಾಣ https://yadgir.dcourts.gov.in/online-recruitment/ ದಲ್ಲಿ ಪ್ರಕಟಿಸಲಾಗುತ್ತದೆ. ಇದಲ್ಲದೆ, ಸಂದರ್ಶನ ಪತ್ರವನ್ನು ಡೌನ್‌ಲೋಡ್ ಮಾಡಲು ಲಿಂಕ್‌ಅನ್ನು ಒದಗಿಸಲಾಗುತ್ತದೆ.

viii) ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ.

ix) ಅಭ್ಯರ್ಥಿಯು ಯಾವುದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಭ್ಯರ್ಥಿಯು ಕಡೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುತ್ತದೆಂಬುದನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು. **ಕೊನೆಯ ಅರ್ಜಿಯನ್ನು ಬಿಟ್ಟು ಬೇರೆ ಯಾವುದೇ ಅರ್ಜಿ ಪರಿಗಣಿಸಲು ಸಲ್ಲಿಸುವ ಕೋರಿಕೆಗಳನ್ನು ಪರಿಗಣಿಸಲಾಗುವುದಿಲ್ಲ.**

x) ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗಳು, ಜಿಲ್ಲಾ ನ್ಯಾಯಾಲಯ, ಯಾದಗಿರಿ ನಿಗದಿ ಪಡಿಸುವ ಸ್ಥಳ ಹಾಗೂ ಸಮಯಕ್ಕೆ ತಮ್ಮ ಸ್ವಂತ ಖರ್ಚಿನಲ್ಲೇ ಹಾಜರಾಗತಕ್ಕದ್ದು.

**6. ಮೀಸಲಾತಿ ಕೋರುವ ಅಭ್ಯರ್ಥಿಗಳು:**

<table>
<tr><td rowspan="5">ಜಾತಿ ಮೀಸಲಾತಿ ಕೋರುವ ಬಗ್ಗೆ</td><td>1</td><td colspan="2">ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದಂದು ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಆಪ್‌ಲೋಡ್ ಮಾಡಬೇಕು. ವಿಫಲವಾದರೆ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.</td></tr>
<tr><td rowspan="4">2</td><td colspan="2">ಜಾತಿ ಪ್ರಮಾಣ ಪತ್ರದ ನಿಗದಿತ ನಮೂನೆ:</td></tr>
<tr><td>ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ–ಡಿ</td></tr>
<tr><td>ಪ್ರವರ್ಗ 1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ–ಇ</td></tr>
<tr><td>ಪ್ರವರ್ಗ–2ಎ/2ಬಿ/3ಎ/3ಬಿ ಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ–ಎಫ್</td></tr>
<tr><td colspan="4">ಸೂಚನೆ: ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು. ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.</td></tr>
</table>

**7. ಇತರೆ ಮೀಸಲಾತಿಗಳು**

| | | |
|---|---|---|
| **ಗ್ರಾಮೀಣ ಮೀಸಲಾತಿ** | 1. | ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿರಬೇಕು. |
| | 2. | ಸಾಮಾನ್ಯ ವರ್ಗಕ್ಕೆ ಸೇರಿದ ಮತ್ತು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಬಯಸುವ ಅಭ್ಯರ್ಥಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಲಾದ ನಮೂನೆ–2 ರಲ್ಲಿ ಪ್ರಮಾಣಪತ್ರವನ್ನು ಮತ್ತು ಸಂಬಂಧಪಟ್ಟ ತಹಶೀಲ್ದಾರ್ ನೀಡಿದ ಕೆನೆಪದರಕ್ಕೆ ಸೇರಿದವರಲ್ಲ ಎಂದು ಹೇಳುವ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಈ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮಾನ್ಯವಾಗಿರತಕ್ಕದ್ದು. |
| | 3. | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ/ಪ್ರವರ್ಗ–1/ಪ್ರವರ್ಗ–2(ಎ)/2(ಬಿ)/3(ಎ)/3(ಬಿ) ಗಳಿಗೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಕಡ್ಡಾಯವಾಗಿ ನಮೂನೆ–2 ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಯಿಂದ ಸಹಿ ಮಾಡಲಾದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು ಮತ್ತು ಅದು ಅಧಿಸೂಚನೆಯ ಕೊನೆಯ ದಿನಾಂಕದಂದು ಮಾನ್ಯವಾಗಿರತಕ್ಕದ್ದು. ಯಾವುದೇ ಅಭ್ಯರ್ಥಿಯು ಅದನ್ನು ಸಲ್ಲಿಸಲು ವಿಪಲವಾದರೆ, ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಅನರ್ಹರಾಗುತ್ತಾರೆ. |

| | | |
|---|---|---|
| ಅಂಗವಿಕಲ ಅಭ್ಯರ್ಥಿ ಮೀಸಲಾತಿ | : | ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅಧಿಕೃತ ಜ್ಞಾಪಕ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19.11.2005 ರ ಪ್ರಕಾರ ಅಧಿಸೂಚನೆಯ ಕೊನೆಯ ದಿನಾಂಕದಂದು ಸಂಬಂಧಪಟ್ಟ ಪ್ರಾಧಿಕಾರವು ನೀಡಿದ ಪ್ರಮಾಣ ಪತ್ರವನ್ನು ಹೊಂದಿರಬೇಕು. |
| ಸೇವಾನಿರತ ಅಭ್ಯರ್ಥಿಗಳು | : | ಆಯ್ಕೆ ಪಟ್ಟಿ ಬಿಡುಗಡೆಯಾದ ತಕ್ಷಣ ನೇಮಕಾತಿ ಆದೇಶವನ್ನು ನೀಡುವ ಮೊದಲು ಸೇವಾನಿರತ ಅಭ್ಯರ್ಥಿಗಳು ನಿರಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಈ ಕಚೇರಿಗೆ ಸಲ್ಲಿಸಬೇಕು. |
| ಕಲ್ಯಾಣ–ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ (371–ಜೆ) ಅರ್ಜಿ ಸಲ್ಲಿಸುವವರು | : | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/06/ಪಿಎಲ್‌ಎಕ್ಸ್/2012 ದಿನಾಂದ: 06.11.2013 ರಲ್ಲಿ ಗೊತ್ತುಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಅರ್ಹತಾ ಪ್ರಮಾಣ ಪತ್ರ |
| **ಸೂಚನೆ: ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಪಡೆದ ಜಾತಿ ಪ್ರಮಾಣ ಪತ್ರ ಮತ್ತು ಇತರೆ ಮೀಸಲಾತಿಯನ್ನು ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.** | | |

ಅಭ್ಯರ್ಥಿಗಳು ಕೋರಿದ ಜಾತಿ ಮತ್ತು ಇತರೆ ಮೀಸಲಾತಿಗಳಿಗೆ ಸಂಬಂಧಿಸಿದ ಅಪ್‌ಲೋಡ್ ಮಾಡಲಾದ ಮೂಲದಾಖಲಾತಿಗಳನ್ನು ಸಂದರ್ಶನ / ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು. ಯಾವುದೇ ಅಭ್ಯರ್ಥಿ, ಸಂದರ್ಶನ / ಪರಿಶೀಲನೆಯ ಸಮಯದಲ್ಲಿ ಆಪ್‌ಲೋಡ್ ಮಾಡಲಾದ ಮೂಲದಾಖಲೆಗಳನ್ನು ಸಲ್ಲಿಸಲು ವಿಫಲರಾದರೆ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಗೊಳಿಸಿ ಸಾಮಾನ್ಯ ವರ್ಗದ ಅಡಿಯಲ್ಲಿ ಮಾತ್ರ (ಅರ್ಹ ಅರ್ಜಿಗಳನ್ನು) ಪರಿಗಣಿಸಲಾಗುತ್ತದೆ.

**ಅಭ್ಯರ್ಥಿಗಳು ನಿಗದಿತವಲ್ಲದ ನಮೂನೆಯಲ್ಲಿ ಮೀಸಲಾತಿ ಪ್ರಮಾಣ ಪತ್ರವನ್ನು ಸಲ್ಲಿಸಿದರೆ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

8. ಅರ್ಹ ಅಭ್ಯಥಿಗಳಿಗೆ SMS ಅಥವಾ ಇ–ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಅಭ್ಯರ್ಥಿಯು ಸದರಿ ಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗುವಾಗ ತಪ್ಪದೇ ಹಾಜರುಪಡಿಸತಕ್ಕದ್ದು.

9. ಸಂದರ್ಶನಕ್ಕೆ ಕರೆಯಲಾದ ಅಭ್ಯರ್ಥಿಗಳು ತಮ್ಮ ಸಂದರ್ಶನ ಸೂಚನಾ ಪತ್ರದೊಂದಿಗೆ, ಮತದಾರರ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್ ಅಥವಾ ಪ್ಯಾನ್ ಕಾರ್ಡ್ ಅಥವಾ ಪಡಿತರ ಚೀಟಿ ಅಥವಾ ಪಾಸ್‌ಪೋರ್ಟ್ ಅಥವಾ ಚಾಲನಾ ಪರವಾನಗಿ, ಮೀಸಲಾತಿಗಳ ಮೂಲ ದಾಖಲೆಗಳನ್ನು ಹಾಜರುಪಡಿಸಬೇಕು.

10. ಮೂರು ನಡತೆ ಪ್ರಮಾಣ ಪತ್ರಗಳನ್ನು ಅಂದರೆ 1) ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆ ವ್ಯಾಸಂಗ ಮಾಡಿದ ಸಂಸ್ಥೆಯ ಮುಖ್ಯಸ್ಥರಿಂದ ವಿದ್ಯಾಭ್ಯಾಸದ ವಿವರಗಳೊಂದಿಗೆ ಪಡೆದ ಒಂದು ಪ್ರಮಾಣ ಪತ್ರ ಮತ್ತು 2) ಸಂಬಂಧಿಕರಲ್ಲದ ಆದರೆ ಆಭ್ಯರ್ಥಿಯೊಂದಿಗೆ ಚೆನ್ನಾಗಿ ಪರಿಚಿತರಾಗಿರುವ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಪಡೆದ ಪ್ರತ್ಯೇಕ ಎರಡು ಪ್ರಮಾಣ ಪತ್ರಗಳು.

11. ಆನ್‌ಲೈನ್ ಅರ್ಜಿಯಲ್ಲಿ ಮತ್ತು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಸಲ್ಲಿಸಿದ ಮೂಲ ದಾಖಲೆಗಳಲ್ಲಿ ಯಾವುದೇ ವ್ಯತ್ಯಾಸಗಳು ಕಂಡು ಬಂದರೆ, ಅಭ್ಯರ್ಥಿಯು ತನ್ನ ಉಮೇದುವಾರಿಕೆಯನ್ನು ಕಳೆದುಕೊಳ್ಳುತ್ತಾನೆ.

12. ಆನ್‌ಲೈನ್ ಅರ್ಜಿಯಲ್ಲಿ ಅಭ್ಯರ್ಥಿ ನಮೂದಿಸಿದ ವರ್ಗ/ಮೀಸಲಾತಿಗಳು ಅಂತಿಮವಾಗಿರುತ್ತದೆ. ನಂತರ ಬದಲಾವಣೆ ಕೋರಿದ್ದಲ್ಲಿ ಅಂತಹ ಕೋರಿಕೆಗಳನ್ನು ಯಾವುದೇ ಸಂದರ್ಭದಲ್ಲಿಯೂ ಪರಿಗಣಿಸಲಾಗುವುದಿಲ್ಲ.

13. ಅಭ್ಯರ್ಥಿಯು ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ನೇಮಕಾತಿಗೆ ಯಾವುದೇ ಹಕ್ಕನ್ನು ಹೊಂದಿದಂತಾಗುವುದಿಲ್ಲ ಮತ್ತು ಅಭ್ಯರ್ಥಿಯು ನೇಮಕಕ್ಕೆ ಸೂಕ್ತವೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಯಾದಗಿರಿ ಇವರು ತೃಪ್ತಿ ಹೊಂದದ ಹೊರತು ಯಾವುದೇ ಅಭ್ಯರ್ಥಿಯನ್ನು ಹುದ್ದೆಗೆ ನೇಮಿಸಿಕೊಳ್ಳಲಾಗುದಿಲ್ಲ.

14. ಅಭ್ಯರ್ಥಿಯು ಯಾವುದೇ ಸಿಬ್ಬಂದಿ ಅಥವಾ ಸಿಬ್ಬಂದಿಯೇತರರ ಮೂಲಕ ಉಮೇದುವಾರಿಕೆಗಾಗಿ ಯಾವುದೇ ವಿಧಾನದಿಂದ ಬಾಹ್ಯ ಬೆಂಬಲವನ್ನು ಪಡೆಯಲು ಪ್ರಯತ್ನಿಸಿದರೆ, ಅವರು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

15. ಪರಿಶೀಲನೆಯ ಯಾವುದೇ ಸಮಯದಲ್ಲಿ ಅಥವಾ ನೇಮಕಾತಿಯ ಯಾವುದೇ ಹಂತದಲ್ಲಿ, ಅಭ್ಯರ್ಥಿಯು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳು ಎಂದು ಕಂಡುಬಂದಲ್ಲಿ ಅಥವಾ ಅಭ್ಯರ್ಥಿಯು ಯಾವುದೇ ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ ಅಥವಾ ಅಭ್ಯರ್ಥಿಯು ಯಾವುದೇ ವಸ್ತುನಿಷ್ಠ ಸತ್ಯಗಳನ್ನು ತಿರುಚಿದರೆ ಅಥವಾ ಮೊಟಕುಗೊಳಿಸಿದರೆ, ಅಭ್ಯರ್ಥಿಯು ಉಮೇದುವಾರಿಕೆಯನ್ನು ರದ್ದುಗೊಳಿಸಲಾಗುತ್ತದೆ. ನೇಮಕಾತಿಯ ನಂತರವೂ ಅಂತಹ ಯಾವುದೇ ನ್ಯೂನತೆಗಳು ಕಂಡುಬಂದರೆ, ಅಭ್ಯರ್ಥಿಯ ನೇಮಕಾತಿಯನ್ನು ರದ್ದುಗೊಳಿಸಲಾಗುವುದು. ತಪ್ಪು ಅಪೂರ್ಣ ಅಥವಾ ಮರೆಮಾಚಿದ ಮಾಹಿತಿಯನ್ನು ಒದಗಿಸುವುದು ಅಭ್ಯರ್ಥಿಯ ಅನರ್ಹತೆಗೆ ಕಾರಣವಾಗುದಲ್ಲದೆ ಅಂತಹ ಮಾಹಿತಿಯನ್ನು ಒದಸಿದ್ದಕ್ಕಾಗಿ ಕ್ರಿಮಿನಲ್ ಮೊಕದ್ದಮೆಗೆ ಹೊಣೆಗಾರರಾಗುತ್ತಾರೆ.

X

H J M ARADHYA
Prl.District and Sessions Judge, Yadgir

**ವಿಶೇಷ ಸೂಚನೆ:**

ಈ ಅಧಿಸೂಚನೆಗೆ ಸಂಬಂಧಿಸಿದಂತೆ ಹೊರಡಿಸಲಾಗುವ ನೇಮಕಾತಿ ಆದೇಶವು ಸರ್ಕಾರಿ ಆದೇಶ ಸಂ: ಸಿಆಸುಇ 01 ಸಹಿಮ 2026, ಬೆಂಗಳೂರು ದಿನಾಂಕ: 27.02.2026 ರಲ್ಲಿ ತಿಳಿಸಿರುವಂತೆ ಮಾನ್ಯ ಉಚ್ಚನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

**PR-244**

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ

**ಅಧಿಸೂಚನೆ ಸಂಖ್ಯೆ: ಜಿನ್ಯಾಯಾ: ಆಡಳಿತ: 04/2026 ದಿನಾಂಕ: 20.08.2026**

**ವಿಷಯ** : ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಬೆರಳಚ್ಚು ನಕಲುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

**ಉಲ್ಲೇಖ** :
1. ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂ: ಡಿ.ಜೆ.ಎ/712/2025 ದಿನಾಂಕ: 09.02.2026.
2. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995.
3. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995 ಮತ್ತು ಸರ್ಕಾರಿ ಆದೇಶ ಸಂ: ಸಿಆಸುಇ 53 ಸೆನೆನಿ 2007 ಬೆಂಗಳೂರು ದಿನಾಂಕ 04.01.2008.
4. ಸರ್ಕಾರಿ ಆದೇಶ ಸಂ: ಸಿಆಸುಇ 01 ಸೆಹಿಮ 2026, ಬೆಂಗಳೂರು ದಿನಾಂಕ: 27.02.2026.
5. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2023, ಬೆಂಗಳೂರು ದಿನಾಂಕ: 08.03.2023.
6. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 27.04.2026.
7. ಸರ್ಕಾರಿ ಆದೇಶ ಸಂ: ಸಕಇ 515 ಪಕವಿ 2026 ಬೆಂಗಳೂರು, ದಿನಾಂಕ: 08.05.2026.
8. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 13.05.2026, ತಿದ್ದುಪಡಿ ಆದೇಶ ದಿನಾಂಕ: 18.05.2026 ಮತ್ತು ಸೇರ್ಪಡೆ ಆದೇಶ ದಿನಾಂಕ 25.05.2026.
9. ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ–1977 (ತಿದ್ದುಪಡಿ) ನಿಯಮ, 2021.
10. ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೇರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007 ಹಾಗೂ 2021.
11. ಕಛೇರಿ ಟಿಪ್ಪಣಿ ಹಾಗೂ ಅದರ ಮೇಲೆ ಆದ ಆದೇಶ.

– * * * –

ಈ ಮೂಲಕ, ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ)ದಲ್ಲಿ ಖಾಲಿ ಇರುವ ಬೆರಳಚ್ಚು ನಕಲುಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಯಾದಗಿರಿ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://yadgir.dcourts.gov.in/online-recruitment/ ನಲ್ಲಿ ನೀಡಲಾದ ಲಿಂಕ್ ಮೂಲಕ ಕೆಳಗೆ ಹೇಳಿದ ದಿನಾಂಕಗಳ ಒಳಗಾಗಿ ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ | 31.08.2026 |
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 30.09.2026 ಸಮಯ ರಾತ್ರಿ 11.59 ಗಂಟೆಯವರೆಗೆ |
| ಶುಲ್ಕ ಪಾವತಿಸಲು ಕಡೆಯ ದಿನಾಂಕ | 01.10.2026. |

**ಬೆರಳಚ್ಚು ನಕಲುಗಾರರ:** (Typist Copyists) ಒಟ್ಟು ಹುದ್ದೆಗಳ ಸಂ: 04

**ವೇತನ ಶ್ರೇಣಿ:** 34100–800–35700–900–39300–1000–43300–1125–47800–1250–52800–1375–58300–1500–64300–1650–67600 ಮತ್ತು ಇತರೆ ಭತ್ಯೆಗಳು.

**ಕಲ್ಯಾಣ ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದ) ಅಭ್ಯರ್ಥಿಗಳಿಗಾಗಿ ಗುರುತಿಸಿರುವ ಮೀಸಲಾತಿ:**
**(Local Cadre-371-J)**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಒಟ್ಟು |
|---|---|---|---|
| ಸಾಮಾನ್ಯ | 1 | 1 | 2 |
| ಪ್ರವರ್ಗ–2ಎ | 1 | – | 1 |
| ಪ್ರವರ್ಗ–2ಬಿ | 1 | – | 1 |
| **ಒಟ್ಟು** | 3 | 1 | 4 |

ಮಹಿಳಾ ಮತ್ತು ಮಾಜಿ ಸೈನಿಕ ಮೀಸಲಾತಿಯಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು (G.O No. DPAR 34 ಸೇನೆನಿ 95, Bengaluru dated 15th July, 1996).

**ವಿದ್ಯಾರ್ಹತೆ:** 1. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ ಅಥವಾ ಮೂರು ವರ್ಷದ ಡಿಪ್ಲೋಮ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲಿ ಕಿರಿಯ ಶ್ರೇಣಿಯ ಬೆರಳಚ್ಚು ಅಥವಾ ಡಿಪ್ಲೋಮಾ ವಾಣಿಜ್ಯ ಪರೀಕ್ಷೆ ಅಥವಾ ತತ್ಸಮಾ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ವಿಶೇಷ ಸೂಚನೆ:**

1. ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆ ಎಂದರೆ ಕರ್ನಾಟಕ ಸರ್ಕಾರದ ಸುತ್ತೋಲೆ ಸಂ: ಡಿ.ಪಿ.ಎ.ಆರ್ 81 ಎಸ್.ಸಿ.ಆರ್ 2017, ದಿನಾಂಕ 27.02.2018 ರಲ್ಲಿ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗಳು/ಕೋರ್ಸಗಳಾಗಿರುತ್ತವೆ.

**ಆಯ್ಕೆ ವಿಧಾನ:**

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೇರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007ರನ್ವಯ ಅಭ್ಯರ್ಥಿಗಳಿಗೆ ಕನ್ನಡ ಹಾಗೂ ಇಂಗ್ಲೀಷ್ ಭಾಷೆಗಳಲ್ಲಿ 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯನ್ನು ಬೆರಳಚ್ಚು ಯಂತ್ರ/ಗಣಕಯಂತ್ರ, ಮೇಲೆ ಬೆರಳಚ್ಚು ಮಾಡಲು ಹೇಳಲಾಗುವುದು.

**ಟಿಪ್ಪಣಿ: ಸಾಮರ್ಥ್ಯ ಪರೀಕ್ಷೆಯು ಕನ್ನಡ ಹಾಗೂ ಇಂಗ್ಲೀಷ್ ಎರಡರಲ್ಲಿಯೂ ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಎರಡರಲ್ಲಿಯೂ ಪಡೆಯಬೇಕು ಮತ್ತು ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.**

**ವಯೋಮಿತಿ:** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರು ಕನಿಷ್ಠ 18 ವರ್ಷದವರಾಗಿರಬೇಕು ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| **ಅಭ್ಯರ್ಥಿಯು ಸೇರಿದ ವರ್ಗ** | | **ಗರಿಷ್ಠ ವಯೋಮಿತಿ** |
|---|---|---|
| ಸಾಮಾನ್ಯ ಅಭ್ಯರ್ಥಿಗಳು | : | 40 ವರ್ಷಗಳು |
| ಇತರೆ ಹಿಂದುಳಿದ ವರ್ಗಗಳ ಪ್ರವರ್ಗ 2(ಇ)/ 2(ಬಿ)/ 3(ಎ)/ 3(ಬಿ). | : | 43 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1 | : | 45 ವರ್ಷಗಳು |

1. ಸರ್ಕಾರದ ಆದೇಶ ಸಂ: ಸಿಆಸುಇ 262 ಸೇನೆನಿ 2025, ದಿನಾಂಕ: 29.01.2026 ರನ್ವಯ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಕ್ರಮವಾಗಿ (as a one time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

2. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯದ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆಗೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳು ಅವರು ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

3. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

4. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿವೆಯೋ ಅಷ್ಟು ವರ್ಷಗಳು.

6. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್ ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

7. ಅಭ್ಯರ್ಥಿಯು ರಾಜ್ಯ ಸರ್ಕಾರದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

**ಪರಿವೀಕ್ಷಣಾ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ 02 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ ನಿಯಮಗಳು (ಸಾಮಾನ್ಯ ನೇಮಕಾತಿ) ನಿಯಮ 1977 ತಿದ್ದುಪಡಿ ನಿಯಮ 2021 ರೂಲ್ 11ನ್ನು ಅನುಸರಿಸಲು ತಿಳಿಸಲಾಗಿದೆ.

**ನಿಗದಿತ ಅರ್ಜಿ ಶುಲ್ಕ: ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:**

| | |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | ರೂ. 200/– |
| ಪ್ರವರ್ಗ–2ಎ/2ಬಿ/3ಎ/2ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 100/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 50/– |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://yadgir.dcourts.gov.in/online-recruitment/ ರಲ್ಲಿ ನೀಡಲಾದ ಲಿಂಕ್ ಮುಖಾಂತರ **Online payment through net banking/Credit-Card/Debit-Card/UPI** ಸೌಲಭ್ಯದ ಮೂಲಕ ಪಾವತಿಸಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ಚಲನ್/ಡಿಮಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು.

**ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ವಿಧಾನ:**

1. ಅಭ್ಯರ್ಥಿಯು ಆನ್‌ಲೈನ್ ಮೂಲಕ ಅರ್ಜಿಯನ್ನು ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://yadgir.dcourts.gov.in/online-recruitment/ನಲ್ಲಿ ಸಲ್ಲಿಸಲು ಅವಕಾಶವಿರುತ್ತದೆ.

**ಸೂಚನೆ: ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ವಿಧಾನದಿಂದ ಕಳುಹಿಸಲಾದ/ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

2. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಗತ್ಯವಿರುವ ಮಾಹಿತಿಯನ್ನು ಭರ್ತಿ ಮಾಡಿ, ಉಲ್ಲೇಖಿಸಲಾದ ಸೂಚನೆಗೆ ಅನುಗುಣವಾಗಿ ಶುಲ್ಕವನ್ನು ಪಾವತಿಸತಕ್ಕದ್ದು. ಆನ್‌ಲೈನ್ ಅರ್ಜಿಯನ್ನು ಅಂತಿಮವಾಗಿ ಸಲ್ಲಿಸುವ ಮೊದಲು ಅಭ್ಯರ್ಥಿಯು ಭರ್ತಿ ಮಾಡಿದ ವಿವರಗಳು ಎಲ್ಲಾ ರೀತಿಯಲ್ಲೂ ಸರಿಯಾಗಿವೆಯೇ ಎಂದು ಖಚಿತಪಡಿಸಿಕೊಳ್ಳತಕ್ಕದ್ದು. ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಹಿಂಪಡೆಯಲು ಅಥವಾ ಮಾರ್ಪಡಿಸಲು ಅವಕಾಶವಿರುವುದಿಲ್ಲ.

3. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಸಂಬಂಧಿತ ಕಾಲಂಗಳಲ್ಲಿ ಸಂವಹನಕ್ಕಾಗಿ ಕಡ್ಡಾಯವಾಗಿ ಅವನ/ಅವಳ ಚಾಲ್ತಿಯಲ್ಲಿರುವ ಸರಿಯಾದ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್ ಐಡಿಯನ್ನು ಒದಗಿಸಬೇಕು. ತಪ್ಪಾದ ಮಾಹಿತಿಯನ್ನು ಒದಗಿಸಿದಲ್ಲಿ, ಎಸ್‌ಎಂಎಸ್ ಅಥವಾ ಇ–ಮೇಲ್ ಮುಖಾಂತರ ಸೂಚನೆ/ ಸಂದೇಶಗಳು ಅಭ್ಯರ್ಥಿಗಳಿಗೆ ತಲುಪದಿರುವುದಕ್ಕೆ ಈ ಪ್ರಾಧಿಕಾರವು ಜವಾಬ್ದಾರರಾಗಿರುವುದಿಲ್ಲ.

4. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಗಾತ್ರದ ಶ್ವೇತ ವರ್ಣದ ಹಿನ್ನಲೆಯುಳ್ಳ ಛಾಯಾಚಿತ್ರವನ್ನು ಸ್ಕ್ಯಾನ್ ಮಾಡಬೇಕು (5ಸೆ.ಮೀ. ಉದ್ದ X 3.5 ಸೆ.ಮೀ. ಅಗಲ ಮತ್ತು ಗರಿಷ್ಠ 50 ಕೆಬಿ ಗಾತ್ರ) ಕಪ್ಪು ಬಾಲಪಾಯಿಂಟ್ ಪೆನ್ನಿನಲ್ಲಿ ಬಿಳಿ ಕಾಗದದ ಮೇಲೆ ಸಹಿಯನ್ನು ಮಾಡಿ (2.5 ಸೆ.ಮೀ. ಉದ್ದ X 7.5 ಸೆ.ಮೀ. ಅಗಲ ಮತ್ತು ಗರಿಷ್ಠ 25 ಕೆಬಿ ಗಾತ್ರ) jpg ಸ್ವರೂಪದಲ್ಲಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. jpg ಚಿತ್ರಗಳು ಸ್ಪಷ್ಟವಾಗಿ ಕಾಣುವಂತಿರಬೇಕು, ಹಾಗೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

5. **ಅಭ್ಯರ್ಥಿಯು ಈ ಕೆಳಗಿನ ದಾಖಲೆಗಳನ್ನು ಕಡ್ಡಾಯವಾಗಿ ಮೇಲೆ ತಿಳಿಸಿದ ವೆಬ್‌ಸೈಟ್‌ನಲ್ಲಿ ಅಪ್ ಲೋಡ್ ಮಾಡಬೇಕು.**

i) a) ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.

b) ದ್ವಿತೀಯ ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ.

c) ಕಿರಿಯ ಶ್ರೇಣಿಯ ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳು.

ii) ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಅನ್ವಯಿಸಿದರೆ ಮಾತ್ರ)

iii) 371 ಜೆ ಪ್ರಮಾಣ ಪತ್ರ.

iv) ಇತರೆ ಮೀಸಲಾತಿಗಳು (ಅನ್ವಯಿಸಿದರೆ ಮಾತ್ರ): ಗ್ರಾಮೀಣ ಪ್ರಮಾಣ ಪತ್ರ 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮ ಪ್ರಮಾಣ ಪತ್ರ 1 ರಿಂದ 10ನೇ ತರಗತಿವರೆಗೆ, ಅಂಗವಿಕಲ ಪ್ರಮಾಣ ಪತ್ರ, ಯೋಜನಾ ನಿರಾಶ್ರಿತರು, ಮಾಜಿ ಸೈನಿಕ (ಸೇವೆಯಿಂದ ವಿಮುಕ್ತಿಗೊಳಿಸಿದ) ಇವುಗಳ ಮೂಲ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಪಿಡಿಎಫ್ ನಮೂನೆಯಲ್ಲಿ ಮಾತ್ರ ಅಪ್ ಲೋಡ್ ಮಾಡತಕ್ಕದ್ದು ಮತ್ತು ಓದಲು ಸ್ಪಷ್ಟವಾಗಿರಬೇಕು.

**ಸೂಚನೆ: ಅಭ್ಯರ್ಥಿಯು ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಮೇಲೆ ಹೇಳಲಾದ ಯಾವುದೇ ಪ್ರಮಾಣಪತ್ರಗಳನ್ನು ಅಪ್‌ಲೋಡ್ ಮಾಡಲು ವಿಫಲರಾದಲ್ಲಿ, ನಂತರ ಸ್ವೀಕರಿಸಲಾಗುವುದಿಲ್ಲ.**

v) ಆನ್‌ಲೈನ್ ಅರ್ಜಿಯನ್ನು ಅಂತಿಮವಾಗಿ ಸಲ್ಲಿಸುವ ಮೊದಲು, ಅಭ್ಯರ್ಥಿಯು ಸರಿಯಾಗಿ ಭರ್ತಿ ಮಾಡಿದ ಅರ್ಜಿಯನ್ನು ಪೂರ್ವವೀಕ್ಷಿಸಲು (preview) ಅವಕಾಶವಿರುತ್ತದೆ. ಅಭ್ಯರ್ಥಿಯು ಭರ್ತಿ ಮಾಡಿದ ಅರ್ಜಿಯನ್ನು ದಾಖಲೆಗಾಗಿ ಮುದ್ರಿಸಿಟ್ಟುಕೊಳ್ಳತಕ್ಕದ್ದು.

vi) ಅಭ್ಯರ್ಥಿಯು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗಿರಿ ವೆಬ್‌ಸೈಟ್‌ನಲ್ಲಿ ಒದಗಿಸಲಾಗುವ ಲಿಂಕ್‌ನಿಂದ ಸೂಚನಾ/ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಲು ಮತ್ತು ಸಂದರ್ಶನಕ್ಕೆ ಅರ್ಹತೆಯ ಕುರಿತು

ಮಾಹಿತಿಗಾಗಿ ತಮ್ಮ ಅರ್ಜಿ ಸಂಖ್ಯೆಯನ್ನು ಜಾಗರೂಕತೆಯಿಂದ ಇಟ್ಟುಕೊಳತಕ್ಕದ್ದು. ಆಭ್ಯರ್ಥಿಗಳು ಜಿಲ್ಲಾ ನ್ಯಾಯಾಲಯದ ಜಾಲತಾಣದ ನೇಮಕಾತಿ ಅಧಿಸೂಚನೆ ವಿಭಾಗಕ್ಕೆ ನಿಯಮಿತವಾಗಿ ಭೇಟಿ ನೀಡಿ ಹುದ್ದೆಗಳ ಕುರಿತಾದ ಮಾಹಿತಿಯನ್ನು ಪಡೆಯತಕ್ಕದ್ದು.

vii) ಸಂದರ್ಶನಕ್ಕೆ ಆಯ್ಕೆ ಮಾಡಲಾಗುವ ಆರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ಜಾಲತಾಣ https://yadgir.dcourts.gov.in/online-recruitment/ ದಲ್ಲಿ ಪ್ರಕಟಿಸಲಾಗುತ್ತದೆ. ಇದಲ್ಲದೆ, ಸಂದರ್ಶನ ಪತ್ರವನ್ನು ಡೌನ್‌ಲೋಡ್ ಮಾಡಲು ಲಿಂಕ್‌ಅನ್ನು ಒದಗಿಸಲಾಗುತ್ತದೆ.

viii) ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ.

ix) ಅಭ್ಯರ್ಥಿಯು ಯಾವುದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಭ್ಯರ್ಥಿಯು ಕಡೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುತ್ತದೆಂಬುದನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು. **ಕೊನೆಯ ಅರ್ಜಿಯನ್ನು ಬಿಟ್ಟು ಬೇರೆ ಯಾವುದೇ ಅರ್ಜಿ ಪರಿಗಣಿಸಲು ಸಲ್ಲಿಸುವ ಕೋರಿಕೆಗಳನ್ನು ಪರಿಗಣಿಸಲಾಗುವುದಿಲ್ಲ.**

x) ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗಳು, ಜಿಲ್ಲಾ ನ್ಯಾಯಾಲಯ, ಯಾದಗಿರಿ ನಿಗದಿ ಪಡಿಸುವ ಸ್ಥಳ ಹಾಗೂ ಸಮಯಕ್ಕೆ ತಮ್ಮ ಸ್ವಂತ ಖರ್ಚಿನಲ್ಲೇ ಹಾಜರಾಗತಕ್ಕದ್ದು.

6. **ಮೀಸಲಾತಿ ಕೋರುವ ಅಭ್ಯರ್ಥಿಗಳು:**

| | | | |
|---|---|---|---|
| ಜಾತಿ ಮೀಸಲಾತಿ ಕೋರುವ ಬಗ್ಗೆ | 1 | ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದಂದು ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ವಿಫಲವಾದರೆ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. | |
| | 2 | ಜಾತಿ ಪ್ರಮಾಣ ಪತ್ರದ ನಿಗದಿತ ನಮೂನೆ: | |
| | | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ–ಡಿ |
| | | ಪ್ರವರ್ಗ 1 ಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ–ಇ |
| | | ಪ್ರವರ್ಗ–2ಎ/2ಬಿ/3ಎ/3ಬಿ ಗೆ ಸೇರಿದ ಅಭ್ಯರ್ಥಿಗಳು | ನಮೂನೆ–ಎಫ್ |
| **ಸೂಚನೆ: ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು. ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.** | | | |

## 7. ಇತರೆ ಮೀಸಲಾತಿಗಳು

| | | |
|---|---|---|
| **ಗ್ರಾಮೀಣ ಮೀಸಲಾತಿ** | 1. | ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿರಬೇಕು. |
| | 2. | ಸಾಮಾನ್ಯ ವರ್ಗಕ್ಕೆ ಸೇರಿದ ಮತ್ತು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಬಯಸುವ ಅಭ್ಯರ್ಥಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಲಾದ ನಮೂನೆ–2 ರಲ್ಲಿ ಪ್ರಮಾಣಪತ್ರವನ್ನು ಮತ್ತು ಸಂಬಂಧಪಟ್ಟ ತಹಶೀಲ್ದಾರ್ ನೀಡಿದ ಕೆನೆಪದರಕ್ಕೆ ಸೇರಿದವರಲ್ಲ ಎಂದು ಹೇಳುವ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಈ ಪ್ರಮಾಣಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಮಾನ್ಯವಾಗಿರತಕ್ಕದ್ದು. |
| | 3. | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ/ಪ್ರವರ್ಗ–1/ಪ್ರವರ್ಗ–2(ಎ)/2(ಬಿ)/3(ಎ)/3(ಬಿ) ಗಳಿಗೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಕಡ್ಡಾಯವಾಗಿ ನಮೂನೆ–2 ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಯಿಂದ ಸಹಿ ಮಾಡಲಾದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು ಮತ್ತು ಅದು ಅಧಿಸೂಚನೆಯ ಕೊನೆಯ ದಿನಾಂಕದಂದು ಮಾನ್ಯವಾಗಿರತಕ್ಕದ್ದು. ಯಾವುದೇ ಅಭ್ಯರ್ಥಿಯು ಅದನ್ನು ಸಲ್ಲಿಸಲು ವಿಫಲವಾದರೆ, ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಅನರ್ಹರಾಗುತ್ತಾರೆ. |
| ಅಂಗವಿಕಲ ಅಭ್ಯರ್ಥಿ ಮೀಸಲಾತಿ | : | ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅಧಿಕೃತ ಜ್ಞಾಪಕ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19.11.2005 ರ ಪ್ರಕಾರ ಅಧಿಸೂಚನೆಯ ಕೊನೆಯ ದಿನಾಂಕದಂದು ಸಂಬಂಧಪಟ್ಟ ಪ್ರಾಧಿಕಾರವು ನೀಡಿದ ಪ್ರಮಾಣ ಪತ್ರವನ್ನು ಹೊಂದಿರಬೇಕು. |
| ಸೇವಾನಿರತ ಅಭ್ಯರ್ಥಿಗಳು | : | ಆಯ್ಕೆ ಪಟ್ಟಿ ಬಿಡುಗಡೆಯಾದ ತಕ್ಷಣ ನೇಮಕಾತಿ ಆದೇಶವನ್ನು ನೀಡುವ ಮೊದಲು ಸೇವಾನಿರತ ಅಭ್ಯರ್ಥಿಗಳು ನಿರಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಈ ಕಚೇರಿಗೆ ಸಲ್ಲಿಸಬೇಕು. |
| ಕಲ್ಯಾಣ–ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ (371–ಜೆ) ಅರ್ಜಿ ಸಲ್ಲಿಸುವವರು | : | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/06/ಪಿಎಲ್ಎಕ್ಸ್/2012 ದಿನಾಂದ: 06.11.2013 ರಲ್ಲಿ ಗೊತ್ತುಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಅರ್ಹತಾ ಪ್ರಮಾಣ ಪತ್ರ |

**ಸೂಚನೆ: ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಪಡೆದ ಜಾತಿ ಪ್ರಮಾಣ ಪತ್ರ ಮತ್ತು ಇತರೆ ಮೀಸಲಾತಿಯನ್ನು ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

ಅಭ್ಯರ್ಥಿಗಳು ಕೋರಿದ ಜಾತಿ ಮತ್ತು ಇತರೆ ಮೀಸಲಾತಿಗಳಿಗೆ ಸಂಬಂಧಿಸಿದ ಅಪ್‌ಲೋಡ್ ಮಾಡಲಾದ ಮೂಲದಾಖಲಾತಿಗಳನ್ನು ಸಂದರ್ಶನ / ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು. ಯಾವುದೇ ಅಭ್ಯರ್ಥಿ, ಸಂದರ್ಶನ / ಪರಿಶೀಲನೆಯ ಸಮಯದಲ್ಲಿ ಆಪ್‌ಲೋಡ್ ಮಾಡಲಾದ ಮೂಲದಾಖಲೆಗಳನ್ನು ಸಲ್ಲಿಸಲು ವಿಫಲರಾದರೆ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಗೊಳಿಸಿ ಸಾಮಾನ್ಯ ವರ್ಗದ ಅಡಿಯಲ್ಲಿ ಮಾತ್ರ (ಅರ್ಹ ಅರ್ಜಿಗಳನ್ನು) ಪರಿಗಣಿಸಲಾಗುತ್ತದೆ.

**ಅಭ್ಯರ್ಥಿಗಳು ನಿಗದಿತವಲ್ಲದ ನಮೂನೆಯಲ್ಲಿ ಮೀಸಲಾತಿ ಪ್ರಮಾಣ ಪತ್ರವನ್ನು ಸಲ್ಲಿಸಿದರೆ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

8. ಅರ್ಹ ಅಭ್ಯಥಿಗಳಿಗೆ SMS ಅಥವಾ ಇ–ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಅಭ್ಯರ್ಥಿಯು ಸದರಿ ಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗುವಾಗ ತಪ್ಪದೇ ಹಾಜರುಪಡಿಸತಕ್ಕದ್ದು.

9. ಸಂದರ್ಶನಕ್ಕೆ ಕರೆಯಲಾದ ಅಭ್ಯರ್ಥಿಗಳು ತಮ್ಮ ಸಂದರ್ಶನ ಸೂಚನಾ ಪತ್ರದೊಂದಿಗೆ, ಮತದಾರರ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್ ಅಥವಾ ಪ್ಯಾನ್ ಕಾರ್ಡ್ ಅಥವಾ ಪಡಿತರ ಚೀಟಿ ಅಥವಾ ಪಾಸ್‌ಪೋರ್ಟ್ ಅಥವಾ ಚಾಲನಾ ಪರವಾನಗಿ, ಮೀಸಲಾತಿಗಳ ಮೂಲ ದಾಖಲೆಗಳನ್ನು ಹಾಜರುಪಡಿಸಬೇಕು.

10. ಮೂರು ನಡತೆ ಪ್ರಮಾಣ ಪತ್ರಗಳನ್ನು ಅಂದರೆ 1) ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆ ವ್ಯಾಸಂಗ ಮಾಡಿದ ಸಂಸ್ಥೆಯ ಮುಖ್ಯಸ್ಥರಿಂದ ವಿದ್ಯಾಭ್ಯಾಸದ ವಿವರಗಳೊಂದಿಗೆ ಪಡೆದ ಒಂದು ಪ್ರಮಾಣ ಪತ್ರ ಮತ್ತು 2) ಸಂಬಂಧಿಕರಲ್ಲದ ಆದರೆ ಆಭ್ಯರ್ಥಿಯೊಂದಿಗೆ ಚೆನ್ನಾಗಿ ಪರಿಚಿತರಾಗಿರುವ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಪಡೆದ ಪ್ರತ್ಯೇಕ ಎರಡು ಪ್ರಮಾಣ ಪತ್ರಗಳು.

11. ಆನ್‌ಲೈನ್ ಅರ್ಜಿಯಲ್ಲಿ ಮತ್ತು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಸಲ್ಲಿಸಿದ ಮೂಲ ದಾಖಲೆಗಳಲ್ಲಿ ಯಾವುದೇ ವ್ಯತ್ಯಾಸಗಳು ಕಂಡು ಬಂದರೆ, ಅಭ್ಯರ್ಥಿಯು ತನ್ನ ಉಮೇದುವಾರಿಕೆಯನ್ನು ಕಳೆದುಕೊಳ್ಳುತ್ತಾನೆ.

12. ಆನ್‌ಲೈನ್ ಅರ್ಜಿಯಲ್ಲಿ ಅಭ್ಯರ್ಥಿ ನಮೂದಿಸಿದ ವರ್ಗ/ಮೀಸಲಾತಿಗಳು ಅಂತಿಮವಾಗಿರುತ್ತದೆ. ನಂತರ ಬದಲಾವಣೆ ಕೋರಿದ್ದಲ್ಲಿ ಅಂತಹ ಕೋರಿಕೆಗಳನ್ನು ಯಾವುದೇ ಸಂದರ್ಭದಲ್ಲಿಯೂ ಪರಿಗಣಿಸಲಾಗುವುದಿಲ್ಲ.

13. ಅಭ್ಯರ್ಥಿಯು ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ನೇಮಕಾತಿಗೆ ಯಾವುದೇ ಹಕ್ಕನ್ನು ಹೊಂದಿದಂತಾಗುವುದಿಲ್ಲ ಮತ್ತು ಅಭ್ಯರ್ಥಿಯು ನೇಮಕಕ್ಕೆ ಸೂಕ್ತವೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಯಾದಗಿರಿ ಇವರು ತೃಪ್ತಿ ಹೊಂದದ ಹೊರತು ಯಾವುದೇ ಅಭ್ಯರ್ಥಿಯನ್ನು ಹುದ್ದೆಗೆ ನೇಮಿಸಿಕೊಳ್ಳಲಾಗುದಿಲ್ಲ.

14. ಅಭ್ಯರ್ಥಿಯು ಯಾವುದೇ ಸಿಬ್ಬಂದಿ ಅಥವಾ ಸಿಬ್ಬಂದಿಯೇತರರ ಮೂಲಕ ಉಮೇದುವಾರಿಕೆಗಾಗಿ ಯಾವುದೇ ವಿಧಾನದಿಂದ ಬಾಹ್ಯ ಬೆಂಬಲವನ್ನು ಪಡೆಯಲು ಪ್ರಯತ್ನಿಸಿದರೆ, ಅವರು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

15. ಪರಿಶೀಲನೆಯ ಯಾವುದೇ ಸಮಯದಲ್ಲಿ ಅಥವಾ ನೇಮಕಾತಿಯ ಯಾವುದೇ ಹಂತದಲ್ಲಿ, ಅಭ್ಯರ್ಥಿಯು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳು ಎಂದು ಕಂಡುಬಂದಲ್ಲಿ ಅಥವಾ ಅಭ್ಯರ್ಥಿಯು ಯಾವುದೇ ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ ಅಥವಾ ಅಭ್ಯರ್ಥಿಯು ಯಾವುದೇ ವಸ್ತುನಿಷ್ಠ ಸತ್ಯಗಳನ್ನು ತಿರುಚಿದರೆ ಅಥವಾ ಮೊಟಕುಗೊಳಿಸಿದರೆ, ಅಭ್ಯರ್ಥಿಯು ಉಮೇದುವಾರಿಕೆಯನ್ನು

ರದ್ದುಗೊಳಿಸಲಾಗುತ್ತದೆ. ನೇಮಕಾತಿಯ ನಂತರವೂ ಅಂತಹ ಯಾವುದೇ ನ್ಯೂನತೆಗಳು ಕಂಡುಬಂದರೆ, ಅಭ್ಯರ್ಥಿಯ ನೇಮಕಾತಿಯನ್ನು ರದ್ದುಗೊಳಿಸಲಾಗುವುದು. ತಪ್ಪು ಅಪೂರ್ಣ ಅಥವಾ ಮರೆಮಾಚಿದ ಮಾಹಿತಿಯನ್ನು ಒದಗಿಸುವುದು ಅಭ್ಯರ್ಥಿಯ ಅನರ್ಹತೆಗೆ ಕಾರಣವಾಗುದಲ್ಲದೆ ಅಂತಹ ಮಾಹಿತಿಯನ್ನು ಒದಸಿದ್ದಕ್ಕಾಗಿ ಕ್ರಿಮಿನಲ್ ಮೊಕದ್ದಮೆಗೆ ಹೊಣೆಗಾರರಾಗುತ್ತಾರೆ.

X

H J M ARADHYA
Prl.District and Sessions Judge, Yadgir

**ವಿಶೇಷ ಸೂಚನೆ:**
ಈ ಅಧಿಸೂಚನೆಗೆ ಸಂಬಂಧಿಸಿದಂತೆ ಹೊರಡಿಸಲಾಗುವ ನೇಮಕಾತಿ ಆದೇಶವು ಸರ್ಕಾರಿ ಆದೇಶ ಸಂ: ಸಿಆಸುಇ 01 ಸಹಿಮ 2026, ಬೆಂಗಳೂರು ದಿನಾಂಕ: 27.02.2026 ರಲ್ಲಿ ತಿಳಿಸಿರುವಂತೆ ಮಾನ್ಯ ಉಚ್ಚನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

**PR-245**

## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ

**ಅಧಿಸೂಚನೆ ಸಂಖ್ಯೆ: ಜಿನ್ಯಾಯಾ: ಆಡಳಿತ: 05/2026 ದಿನಾಂಕ : 20.08.2026**

**ವಿಷಯ** : ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಆದೇಶ ಜಾರಿಕಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

**ಉಲ್ಲೇಖ** :
1. ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂ: ಡಿ.ಜೆ.ಎ/712/2025 ದಿನಾಂಕ: 09.02.2026.
2. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995.
3. ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995, ಬೆಂಗಳೂರು ದಿನಾಂಕ: 20.06.1995 ಮತ್ತು ಸರ್ಕಾರಿ ಆದೇಶ ಸಂ: ಸಿಆಸುಇ 53 ಸೆನೆನಿ 2007 ಬೆಂಗಳೂರು ದಿನಾಂಕ 04.01.2008.
4. ಸರ್ಕಾರಿ ಆದೇಶ ಸಂ: ಸಿಆಸುಇ 01 ಸೆಹಿಮ 2026, ಬೆಂಗಳೂರು ದಿನಾಂಕ: 27.02.2026.
5. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2023, ಬೆಂಗಳೂರು ದಿನಾಂಕ: 08.03.2023.
6. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 27.04.2026.
7. ಸರ್ಕಾರಿ ಆದೇಶ ಸಂ: ಸಕಇ 515 ಪಕವಿ 2026 ಬೆಂಗಳೂರು, ದಿನಾಂಕ: 08.05.2026.
8. ಸರ್ಕಾರಿ ಆದೇಶ ಸಂ: ಸಿಆಸುಇ 02 ಸೆಹಿಮ 2026, ಬೆಂಗಳೂರು ದಿನಾಂಕ: 13.05.2026, ತಿದ್ದುಪಡಿ ಆದೇಶ ದಿನಾಂಕ: 18.05.2026 ಮತ್ತು ಸೇರ್ಪಡೆ ಆದೇಶ ದಿನಾಂಕ 25.05.2026.

9. ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ–1977 (ತಿದ್ದುಪಡಿ) ನಿಯಮ, 2021.
10. ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007 ಹಾಗೂ 2021.
11. ಕಛೇರಿ ಟಿಪ್ಪಣಿ ಹಾಗೂ ಅದರ ಮೇಲೆ ಆದ ಆದೇಶ.

– * * * –

ಈ ಮೂಲಕ, ಯಾದಗಿರಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ ವೃಂದ (ಸ್ಥಳೀಯ ವೃಂದ)ದಲ್ಲಿ ಖಾಲಿ ಇರುವ ಆದೇಶ ಜಾರಿಕಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಯಾದಗಿರಿ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://yadgir.dcourts.gov.in/online-recruitment/ ನಲ್ಲಿ ನೀಡಲಾದ ಲಿಂಕ್ ಮೂಲಕ ಕೆಳಗೆ ಹೇಳಿದ ದಿನಾಂಕಗಳ ಒಳಗಾಗಿ ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ | 31.08.2026 |
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 30.09.2026<br>ಸಮಯ ರಾತ್ರಿ 11.59 ಗಂಟೆಯವರೆಗೆ |
| ಶುಲ್ಕ ಪಾವತಿಸಲು ಕಡೆಯ ದಿನಾಂಕ | 01.10.2026. |

ಆದೇಶ ಜಾರಿಕಾರರ: (Process Server) ಒಟ್ಟು ಹುದ್ದೆಗಳ ಸಂ: **09**
**ವೇತನ ಶ್ರೇಣಿ:** 31775–725–32500–800–35700–900–3900–1000–43300–1125–47800–1250–52800–1375–58300–1500–61300– ಮತ್ತು ಇತರೆ ಭತ್ಯೆಗಳು.
**ಕಲ್ಯಾಣ ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದ) ಅಭ್ಯರ್ಥಿಗಳಿಗಾಗಿ ಗುರುತಿಸಿರುವ ಮೀಸಲಾತಿ:**

**(Local Cadre-371-J)**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | **1** | **–** | **–** | **–** | **1** |
| ಸಾಮಾನ್ಯ | **1** | **2** | **2** | **1***  | **6** |
| ಪ್ರವರ್ಗ–2ಎ | **1** | **1** | **–** | **–** | **2** |
| **ಒಟ್ಟು** | **3** | **3** | **2** | **1** | **9** |

* ಅಂಗವಿಕಲರ ಹುದ್ದೆಯು ದೃಷ್ಟಿಮಾಂದ್ಯ–ದೃಷ್ಟಿದೋಷ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಯಾಗಿದೆ. ಒಂದು ವೇಳೆ ಮೇಲ್ಕಂಡ ಅಧಿಸೂಚಿಸಿದ ಅಂಗವೈಕಲ್ಯಗಳನ್ನುಳ್ಳ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

ಮಹಿಳಾ ಮತ್ತು ಮಾಜಿ ಸೈನಿಕ ಮೀಸಲಾತಿಯಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು (G.O No. DPAR 34 ಸೇನೆನಿ 95, Bengaluru dated 15th July, 1996).

**ವಿದ್ಯಾರ್ಹತೆ:** 1. ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕರ್ನಾಟಕ ಸರ್ಕಾರದ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

2. ಲಘುವಾಹನ ಚಾಲನಾ ಪರವಾನಿಗೆ (driving licence) ಪತ್ರ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**ವಿಶೇಷ ಸೂಚನೆ:**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆ ಎಂದರೆ ಕರ್ನಾಟಕ ಸರ್ಕಾರದ ಸುತ್ತೋಲೆ ಸಂ: ಡಿ.ಪಿ.ಎ.ಆರ್ 81 ಎಸ್.ಸಿ.ಆರ್ 2017, ದಿನಾಂಕ 27.02.2018 ರಲ್ಲಿ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗಳು/ಕೋರ್ಸಗಳಾಗಿರುತ್ತವೆ.
2. 10ನೇ ತರಗತಿ ಅಂಕಗಳು ಶ್ರೇಣಿಯಲ್ಲಿ ಅಥವಾ ಗ್ರೇಡನಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಪಡೆದ ಅಂಕಗಳನ್ನು ನಮೂದಿಸಿದ ಅಂಕಪಟ್ಟಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.

**ಆಯ್ಕೆ ವಿಧಾನ:**

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೇರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007 ಹಾಗೂ 2021 ರನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳ ಆಧಾರದ ಮೇಲೆ 1 ಹುದ್ದೆಗೆ 25 ಅಭ್ಯರ್ಥಿಗಳಂತೆ (1:25ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ: ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.**

**ವಯೋಮಿತಿ:** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರು ಕನಿಷ್ಠ 18 ವರ್ಷದವರಾಗಿರಬೇಕು ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| **ಅಭ್ಯರ್ಥಿಯು ಸೇರಿದ ವರ್ಗ** | | **ಗರಿಷ್ಠ ವಯೋಮಿತಿ** |
|---|---|---|
| ಸಾಮಾನ್ಯ ಅಭ್ಯರ್ಥಿಗಳು | : | 40 ವರ್ಷಗಳು |
| ಇತರೆ ಹಿಂದುಳಿದ ವರ್ಗಗಳ ಪ್ರವರ್ಗ 2(ಎ)/ 2(ಬಿ)/ 3(ಎ)/ 3(ಬಿ). | : | 43 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1 | : | 45 ವರ್ಷಗಳು |

